ವೀರಾಜಪೇಟೆ ತಾಲ್ಲೂಕಿನ ಕೆರೆಗಳ ಹೂಳು ತೆಗೆಯುವುದು

2187: ಶ್ರೀಮತಿ ಸುಮಾವಸಂತ (ವೀರಾಜಪೇಟೆ):– ಮಾನ್ಯ ಸಣ್ಣ ನೀರಾವರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ವೀರಾಜಪೇಟೆ ತಾಲ್ಲೂಕಿನ ಅನೇಕ ಕೆರೆಗಳ ಹೂಳು ತೆಗೆಯದಿರುವುದರಿಂದಾಗಿ ಕೆರೆಗಳಲ್ಲಿ ಸಾಕಷ್ಟು ನೀರು ನಿಲ್ಲದೆ ರೈತರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿಈ ಬಗ್ಗೆ ಕೂಡಲೆ ಕ್ರಮ ಕೈಗೊಂಡು ಹೂಳು ತೆಗೆಸಿ ರೈತರ ತೊಂದರೆ ನಿವಾರಣೆ ಮಾಡಲಾಗುವುದೆ ?

ಡಾ. ಆರ್.ಬಿ. ಚೌಧರಿ (ಸಣ್ಣ ನೀರಾವರಿ ರಾಜ್ಯಸಚಿವರು):–

ಅ) ಬಂದಿದೆ.

ಆ) ಪರಿಶೀಲಿಸಲಾಗುವುದು.

ತುಮಕೂರು ಮತ್ತು ಚಿತ್ರದುರ್ಗ ಜಿಲ್ಲೆಗಳಲ್ಲಿ ಹೊಸ ನೀರಾವರಿ ಯೋಜನೆ

846: ಶ್ರೀ ಟಿ.ಬಿ. ಜಯಚಂದ್ರ (ಕಳ್ಳಂಬೆಳ್ಳ):– ಮಾನ್ಯ ಸಣ್ಣ ನೀರಾವರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ತುಮಕೂರಿನ ಶಿರಾ, ಮಧುಗಿರಿ, ಪಾವಗಡ ಹಾಗೂ ಚಿತ್ರದುರ್ಗದ ಹೊಸದುರ್ಗ, ಹೊಳಲ್‌ಕೆರೆ, ಮೊಳಕಾಲ್ಮೂರ್ ಮತ್ತು ಇತರ ತಾಲ್ಲೂಕುಗಳು ಅತ್ಯಂತ ಕಡಿಮೆ ಮಳೆ ಬೀಳುವ ಪ್ರದೇಶಗಳಾಗಿರುವುದು ಸರ್ಕಾರಕ್ಕೆ ತಿಳಿದಿದೆಯೇ;

ಆ) ಈ ಎಲ್ಲಾ ತಾಲ್ಲೂಕುಗಳನ್ನೊಳಗೊಂಡಂತೆ ಸರ್ಕಾರ ಯಾವುದಾದರೂ ನೀರಾವರಿ ಯೋಜನೆಗಳನ್ನು ಕೈಗೆತ್ತಿಕೊಳ್ಳು ಉದ್ದೇಶಿಸಿದೆಯೇ;

ಇ) ಹೀಗಿದ್ದಲ್ಲಿ ಅವು ಯಾವುವು ? ಅವುಗಳನ್ನು ಕಾರ್ಯಗತಗೊಳಿಸಲು ಕಾಲಮಿತಿ ಏನಾದರೂ ಇದೆಯೇ ?

ಡಾ. ಆರ್.ಬಿ. ಚೌಧರಿ (ಸಣ್ಣ ನೀರಾವರಿ ರಾಜ್ಯ ಸಚಿವರು):–

ಅ) ತಿಳಿದಿದೆ.

ಆ) ಈ ಎಲ್ಲಾ ತಾಲ್ಲೂಕುಗಳನ್ನೊಳಗೊಂಡಂತೆ ಯಾವುದೇ ಸಮಗ್ರ ನೀರಾವರಿ ಯೋಜನೆ ಇರುವುದಿಲ್ಲ. ಆದಾಗ್ಯೂ ಈ ತಾಲ್ಲೂಕುಗಳಲ್ಲಿ ಕೆಲವು ಸಣ್ಣ ನೀರಾವರಿ ಕಾರ್ಯಗಳನ್ನು ಕೈಗೆತ್ತಿಕೊಂಡಿದೆ.

ಇ) 1) ವಿವರಗಳನ್ನು ಅನುಬಂಧದಲ್ಲಿ ನೀಡಿದೆ.

2) ಇನ್ನೆರಡು ವರ್ಷಗಳಲ್ಲಿ ಈ ಯೋಜನೆಗಳನ್ನು ಪೂರೈಸಲು ಉದ್ದೇಶಿಸಿದೆ